Akashvani : Bangalore
Regional Bulletin In Kannada
04.05.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬಾಗಲಕೋಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿಗೆ ಗೆಲುವು; ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಮುನ್ನಡೆ
- ಪಶ್ಚಿಮಬಂಗಾಳ, ಅಸ್ಸಾಂನಲ್ಲಿ ಅಧಿಕಾರದ ಹೊಸ್ತಿಲಲ್ಲಿ ಬಿಜೆಪಿ; ತಮಿಳುನಾಡಿನಲ್ಲಿ ನಟ ವಿಜಯ್ ನೇತೃತ್ವದ ಟಿವಿಕೆ, ಕೇರಳಂನಲ್ಲಿ ಕಾಂಗ್ರೆಸ್ ಮುನ್ನಡೆ
- ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಡಿ.ಎಂ.ಜೀವರಾಜ್‌ಗೆ ಗೆಲುವು; ಚುನಾವಣಾ ಆಯೋಗದಿಂದ ಪ್ರಮಾಣ ಪತ್ರ ವಿತರಣೆ
- ಬೆಂಗಳೂರು ನಗರ ವಿಶ್ವವಿದ್ಯಾಲಯದಲ್ಲಿ ಕೃತಕ ಬುದ್ಧಿಮತ್ತೆ ಪ್ರಯೋಗಾಲಯ ಆರಂಭಿಸಲು ಚಿಂತನೆ

<><*<><>*><>

ಬಾಗಲಕೋಟೆ ವಿಧಾನಸಭಾ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ೨೧ ಸಾವಿರದ ೮೬೬ ಮತಗಳಿಂದ ಗೆಲುವು ಸಾಧಿಸಿದ್ದಾರೆ. ಉಮೇಶ್ ಮೇಟಿ ಅವರಿಗೆ ೯೬ ಸಾವಿರದ ೯೪೧ ಮತಗಳು ಲಭಿಸಿವೆ. ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿ ಮಠ ಅವರಿಗೆ ೭೬ ಸಾವಿರದ ೭೫ ಮತಗಳು ಲಭಿಸಿವೆ. ಮತ ಎಣಿಕೆ ಆರಂಭದಿಂದ ಅಂತಿಮ ಸುತ್ತಿನವರೆಗೂ ಮುನ್ನಡೆ ಕಾಯ್ದುಕೊಂಡಿದ್ದ ಕಾಂಗ್ರೆಸ್ ಗೆಲುವು ಸಾಧಿಸಿದೆ. ಫಲಿತಾಂಶ ಪ್ರಕಟವಾಗುತ್ತಿದ್ದಂತೆಯೇ ಕಾಂಗ್ರೆಸ್ ಕಾರ್ಯಕರ್ತರು ಸಂಭ್ರಮಾಚರಣೆ ನಡೆಸಿದ್ದಾರೆ. ಬಳಿಕ ಮಾತನಾಡಿದ ಉಮೇಶ್ ಮೇಟಿ, ಕಾಂಗ್ರೆಸ್ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಹಾಗೂ ಪಕ್ಷದ ಪ್ರಣಾಳಿಕೆ ಗೆಲುವಿಗೆ ಪ್ರಮುಖ ಕಾರಣವಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ಕ್ಷೇತ್ರದ ಜನತೆಗೆ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

ಧ್ವನಿ: ಉಮೇಶ್ ಮೇಟಿ (    ಸೆಕೆಂಡ್ಸ್)

<><*<><>*><>

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಮತ ಎಣಿಕೆ ಕಾರ್ಯ ಅಂತಿಮ ಹಂತದತ್ತ ಸಾಗುತ್ತಿದ್ದು, ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಮಲ್ಲಿಕಾರ್ಜುನ್ ಮುನ್ನಡೆ

ಕಾಯ್ದುಕೊಂಡಿದ್ದಾರೆ. ಒಟ್ಟು ೨೧ ಸುತ್ತುಗಳ ಪೈಕಿ ೧೫ ಸುತ್ತುಗಳು ಪೂರ್ಣಗೊಂಡಿದ್ದು, ೬ ಸುತ್ತಿನ ಮತ ಎಣಿಕೆ ಬಾಕಿ ಇದೆ. ಸಮರ್ಥ್ ಶಾಮನೂರು ೪೯ ಸಾವಿರದ ೨೩೭ ಮತಗಳೊಂದಿಗೆ ಮುನ್ನಡೆ ಕಾಯ್ದುಕೊಂಡಿದ್ದಾರೆ. ಬಿಜೆಪಿಯ ಶ್ರೀನಿವಾಸ್ ಟಿ. ದಾಸಕರಿಯಪ್ಪ ೪೩ ಸಾವಿರದ ೨೧೪ ಮತ ಪಡೆದು ೬ ಸಾವಿರ ಮತಗಳ ಹಿನ್ನಡೆ ಅನುಭವಿಸಿದ್ದಾರೆ. ಎಸ್‌ಡಿಪಿಐ ಅಭ್ಯರ್ಥಿ ಅಫ್ಸರ್ ಕೊಡ್ಲಿಪೇಟೆ ೧೫ ಸಾವಿರದ ೮೫೯ ಮತಗಳೊಂದಿಗೆ ಮೂರನೇ ಸ್ಥಾನ ಪಡೆದುಕೊಂಡಿದ್ದಾರೆ. ಆರಂಭಿಕ ೭ ಸುತ್ತುಗಳವರೆಗೆ ಬಿಜೆಪಿ ಮತ್ತು ಕಾಂಗ್ರೆಸ್ ನಡುವೆ ತುರುಸಿನ ಸ್ಪರ್ಧೆ ಇತ್ತಾದರೂ, ೮ನೇ ಸುತ್ತಿನಿಂದ ಸಮರ್ಥ್ ಅವರು ಸತತವಾಗಿ ಮುನ್ನಡೆ ಕಾಯ್ದುಕೊಳ್ಳುತ್ತಾ ಬಂದಿದ್ದಾರೆ. ಮುಸ್ಲಿಂ ಮತಗಳ ಧ್ರುವೀಕರಣದ ನಿರೀಕ್ಷೆಯಲ್ಲಿದ್ದ ಎಸ್.ಡಿ.ಪಿ.ಐ ಅಭ್ಯರ್ಥಿ ಅಫ್ಸರ್ ಕೊಡ್ಲಿಪೇಟೆ ಅವರು ೧೫ ಸಾವಿರ ಮತಗಳ ಗಡಿ ದಾಟಿದ್ದರೂ, ಪ್ರಮುಖ ಎರಡೂ ಪಕ್ಷಗಳಿಗೆ ಪೈಪೋಟಿ ನೀಡುವಲ್ಲಿ ವಿಫಲರಾಗಿದ್ದಾರೆ.

<><*<><>*><>

ತೀವ್ರ ಕುತೂಹಲ ಕೆರಳಿಸಿರುವ ನಾಲ್ಕು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶದ ವಿಧಾನಸಭಾ ಚುನಾವಣೆಯ ಮತ ಎಣಿಕೆ ಪ್ರಕ್ರಿಯೆ ಭರದಿಂದ ಸಾಗಿದೆ. ಪಶ್ಚಿಮ ಬಂಗಾಳದ ೨೯೪ ಕ್ಷೇತ್ರಗಳ ಪೈಕಿ ಬಿಜೆಪಿ ೧೯೪ ಕ್ಷೇತ್ರಗಳಲ್ಲಿ, ತೃಮೂಲ ಕಾಂಗ್ರೆಸ್ ೯೩, ಸಿಪಿಎಂ ೧ ಹಾಗೂ ಇತರೆ ಪಕ್ಷಗಳು ೪ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿವೆ. ಅಸ್ಸಾಂನಲ್ಲಿ ಸದ್ಯಕ್ಕೆ ಲಭ್ಯವಾಗಿರುವ ೧೨೬ ಕ್ಷೇತ್ರಗಳ ಮಾಹಿತಿ ಪ್ರಕಾರ ಬಿಜೆಪಿ ೧೦ ಕ್ಷೇತ್ರಗಳಲ್ಲಿ ಜಯ ಗಳಿಸಿದೆ. ಎಜಿಪಿ ೧, ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ ೨ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ. ಉಳಿದಂತೆ ಬಿಜೆಪಿ ೬೯ ಕ್ಷೇತ್ರಗಳಲ್ಲಿ, ಎಜಿಪಿ ೭, ಬೋಡೋಲ್ಯಾಂಡ್ ಪೀಪಲ್ಸ್ ಪಾರ್ಟಿ ೮, ಕಾಂಗ್ರೆಸ್ ೨೫ ಕ್ಷೇತ್ರಗಳಲ್ಲಿ ಮುನ್ನಡೆ ಗಳಿಸಿದೆ. ತಮಿಳುನಾಡಿನಲ್ಲಿ ೨೩೪ ಕ್ಷೇತ್ರಗಳ ಪೈಕಿ ನಟ ವಿಜಯ್ ನೇತೃತ್ವದ ಹೊಸ ಪಕ್ಷ ತಮಿಳಗ ವೆಟ್ರಿ ಕಾಳಗಂ-ಟಿವಿಕೆ ೧೧೦ ಕ್ಷೇತ್ರಗಳಲ್ಲಿ ಮುನ್ನಡೆಯೊಂದಿಗೆ ಅಧಿಕಾರದ ಗದ್ದುಗೆ ಏರಲು ದಾಪುಗಾಲು ಇಡುತ್ತಿದೆ. ಆಡಳಿತಾರೂಢ ಡಿಎಂಕೆ ೪೯ ಕ್ಷೇತ್ರಗಳಲ್ಲಿ, ಎಐಎಡಿಎಂಕೆ ೫೭ ಕ್ಷೇತ್ರಗಳಲ್ಲಿ ಹಾಗೂ ಪಿಎಂಕೆ ೫ ಕ್ಷೇತ್ರಗಳಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ೪ ಕ್ಷೇತ್ರಗಳಲ್ಲಿ, ಬಿಜೆಪಿ ೧ಕ್ಷೇತ್ರಗಳಲ್ಲಿ, ಇತರೆ ೯ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿವೆ. ಕೇರಳಂದಲ್ಲಿ ಒಟ್ಟು ೧೪೦ ಸ್ಥಾನಗಳ ಪೈಕಿ ಕಾಂಗ್ರೆಸ್ ೧೦ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದು, ೫೦ ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಎಲ್‌ಡಿಎಫ್ ೫ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದು, ೨೩ ಕ್ಷೇತ್ರಗಳಲ್ಲಿ ಮುನ್ನಡೆ ಕಾಯ್ದುಕೊಂಡಿದೆ. ಪುದುಚೇರಿಯಲ್ಲಿ ಸದ್ಯಕ್ಕೆ ಲಭ್ಯವಾಗಿರುವ ೧೭ ಕ್ಷೇತ್ರಗಳಲ್ಲಿ ಎನ್‌ಡಿಎ ಮೈತ್ರಿಕೂಟದ ಎಐಎನ್‌ಆರ್‌ಸಿ ೭ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದರೇ, ಬಿಜೆಪಿ ೨ ಸ್ಥಾನಗಳಲ್ಲಿ ಜಯ ಸಾಧಿಸಿದೆ.

ಎಐಎಡಿಎಂಕೆ, ಕಾಂಗ್ರೆಸ್, ಡಿಎಂಕೆ, ತಲಾ ೧ ಕ್ಷೇತ್ರಗಳಲ್ಲಿ ಗೆದ್ದಿದ್ದು, ಪಕ್ಷೇತರ ಅಭ್ಯರ್ಥಿಗಳು ೨ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದಾರೆ.

<><*<><>*><>

ಪಶ್ಚಿಮ ಬಂಗಾಳ, ತಮಿಳುನಾಡು, ಅಸ್ಸಾಂ ಹಾಗೂ ಪುದುಚೆರಿ, ಕೇರಳಂ ರಾಜ್ಯಗಳ ಚುನಾವಣಾ ಫಲಿತಾಂಶ ಕುರಿತಂತೆ ನಾಯಕರು ಪ್ರತಿಕ್ರಿಯೆ ನಿಡಿದ್ದಾರೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಪ್ರತಿಕ್ರಿಯೆ ನೀಡಿ, ಈ ಚುನಾವಣಾ ಫಲಿತಾಂಶ ಎನ್‌ಡಿಎ ಸಾಧನೆ ಎಂದು ಶ್ಲಾಘಿಸಿದ್ದಾರೆ. ಇದು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವ ಮತ್ತು 'ವಿಕಸಿತ ಭಾರತ' ಎಂಬ ಅವರ ದೃಷ್ಟಿಕೋನದ ಪ್ರತಿಫಲ ಎಂದು ಬಣ್ಣಿಸಿದ್ದಾರೆ. ತಮಿಳುನಾಡಿನಲ್ಲಿ ಟಿವಿಕೆ ಪಕ್ಷದ ಮುನ್ನಡೆ ಕುರಿತಂತೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಜಯ್ ಅವರಿಗೆ ಅಭಿನಂದಿಸಿದ್ದಾರೆ. ಕೇರಳದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಸ್ಥಾನ ಗಳಿಸಿದ್ದಕ್ಕೆ ಸಂತಸ ವ್ಯಕ್ತಪಡಿಸಿದ್ದಾರೆ.

<><*<><>*><>

ತಮಿಳುನಾಡು ಫಲಿತಾಂಶ ಅಚ್ಚರಿ ತಂದಿದ್ದು, ಅಲ್ಲಿ ಹೊಸ ಯುಗ ಆರಂಭವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಪಂಚರಾಜ್ಯಗಳ ಚುನಾವಣಾ ಫಲಿತಾಂಶ ಕುರಿತು ಪ್ರತಿಕ್ರಿಯೆ ನೀಡಿದ ಅವರು, ತಮಿಳುನಾಡು ಫಲಿತಾಂಶ ಗ್ರಹಿಸಲು ಸಾಧ್ಯವೇ ಇಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಕೇರಳದಲ್ಲಿ ಕಾಂಗ್ರೆಸ್‌ಗೆ ದೊಡ್ಡ ಬೆಂಬಲ ದೊರೆತಿದೆ ಎಂದು ಹೇಳಿದ್ದಾರೆ. ಅಸ್ಸಾಂನಲ್ಲಿ ಇನ್ನೂ ಹೆಚ್ಚು ಸ್ಥಾನಗಳಿಸುವ ನಿರೀಕ್ಷೆಯಿತ್ತು. ಪಶ್ಚಿಮ ಬಂಗಾಳದಲ್ಲಿ ಮತದಾರರ ಪಟ್ಟಿಯನ್ನು ಅಳಿಸಿಹಾಕಿರುವ ಹಿನ್ನೆಲೆಯಲ್ಲಿ ಟಿಎಂಸಿಗೆ ಹಿನ್ನಡೆಯಾಗಿದೆ ಎಂದು ತಿಳಿಸಿದ್ದಾರೆ. ಇದೇ ವೇಳೆ, ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಗೆಲುವು ಸಾಧಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

<><*<><>*><>

ರಾಜ್ಯ ಸರ್ಕಾರದ ಅಡಳಿತದ ದುರುಪಯೋಗ ಹಾಗೂ ಹಣದ ಹೊಳೆಯಿಂದ ಬಾಗಲಕೋಟೆಯಲ್ಲಿ ಬಿಜೆಪಿಗೆ ಹಿನ್ನಡೆಯಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಅವರು, ದಾವಣಗೆರೆಯಲ್ಲಿ ಇನ್ನೂ ಫಲಿತಾಂಶ ಬರಬೇಕಿದೆ. ಕೊನೆಯ ಕ್ಷಣದಲ್ಲಿ ಏನು ಬೇಕಾದರೂ, ಆಗಬಹುದು, ಹೀಗಾಗಿ ಕಾದು ನೋಡಬೇಕಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಸಂಸದ ಜಗದೀಶ್ ಶೆಟ್ಟರ್ (    ಸೆಕೆಂಡ್ಸ್)

<><*<><>*><>

ಚಿಕ್ಕಮಗಳೂರಿನ ಶೃಂಗೇರಿ ವಿಧಾನಸಭಾ ಕ್ಷೇತ್ರಕ್ಕೆ ೨೦೨೩ರ ಮೇ ೨ ರಂದು ನಡೆದ ಚುನಾವಣೆಯ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಹೆಚ್ಚು ಮತಗಳನ್ನು ಪಡೆದುಕೊಂಡಿದ್ದಾರೆ. ಚಿಕ್ಕಮಗಳೂರು ಚುನಾವಣಾ ಅಧಿಕಾರಿ ಗೌರವ್ ಕುಮಾರ್ ಶೆಟ್ಟಿ ಇಂದು ಅಧಿಕೃತ ಆಯ್ಕೆಯ ಪ್ರಮಾಣ ಪತ್ರ ವಿತರಣೆ ಮಾಡಿದ್ದಾರೆ. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದ ಜೀವರಾಜ್ ಮೂರು ವರ್ಷಗಳ ಹೋರಾಟದ ಫಲವಾಗಿ ನ್ಯಾಯಾಲಯದಲ್ಲಿ ಜಯ ಸಿಕ್ಕಿದೆ ನಾಲ್ಕನೇ ಬಾರಿಗೆ ಶೃಂಗೇರಿ ಕ್ಷೇತ್ರದ ಶಾಸಕನಾಗಿ ಆಯ್ಕೆಯಾಗಿರುವುದು ಸಂತಸ ತಂದಿದೆ ಎಂದು  ಹೇಳಿದ್ದಾರೆ.

<><*<><>*><>

ಮಾಜಿ ಮುಖ್ಯಮಂತ್ರಿ ದಿವಂಗತ ಕೆ.ಸಿ ರೆಡ್ಡಿ, ಒಬ್ಬ ಸಮರ್ಥ, ಪ್ರಾಮಾಣಿಕ  ಆಡಳಿತಗಾರಾಗಿದ್ದು ಸಾರ್ವಜನಿಕ ಜೀವನದಲ್ಲಿ ಅತ್ಯಂತ ಪ್ರಾಮಾಣಿಕತೆಯಿಂದ ನಡೆದುಕೊಂಡವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದ್ದಾರೆ. ದಿವಂಗತ ಕೆ.ಸಿ. ರೆಡ್ಡಿ ಅವರ ಜನ್ಮ ದಿನದ ಅಂಗವಾಗಿ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಕೆ.ಸಿ.ರೆಡ್ಡಿಯವರ ಆಡಳಿತದ ಹೆಜ್ಜೆಗಳು ನಮಗೆ ದಾರಿದೀಪ ಎಂದು ತಿಳಿಸಿದ್ದಾರೆ. ಐಟಿಐ,   ಎಚ್.ಎಂ.ಟಿ,   ಇಸ್ರೋ ಮುಂತಾದ ಸಂಸ್ಥೆಗಳು ರಾಜ್ಯದಲ್ಲಿ ಸ್ಥಾಪನೆಯಾಗಿದ್ದರೆ ಅದಕ್ಕೆ ಅವರು ಮೂಲ ಕಾರಣ ಅವರು ಸ್ಮರಿಸಿದ್ದಾರೆ.

<><*<><>*><>

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕ್ಯಾಂಪಸ್‌ನಲ್ಲಿ ಸದ್ಯದಲ್ಲೇ ಕೃತಕ ಬುದ್ಧಿಮತ್ತೆ ಪ್ರಯೋಗಾಲಯ ಪ್ರಾರಂಭಿಸಲಾಗುವುದು ಎಂದು ಕುಲಪತಿ ಪ್ರೊಫೆಸರ್ ರಮೇಶ್.ಬಿ ತಿಳಿಸಿದ್ದಾರೆ. ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಗಣಕ ವಿಜ್ಞಾನ ವಿಭಾಗದ ವತಿಯಿಂದ ಏರ್ಪಡಿಸಲಾಗಿದ್ದ "ಇನ್ನೋವೆಕ್ಸ್-೨.೦" ತಂತ್ರಜ್ಞಾನ ಕೌಶಲ್ಯ ಮೇಳದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಸೈಬರ್ ಭದ್ರತೆ ಮತ್ತು ಬಯೋ ಇನ್ಫಾರ್ಮೆಟಿಕ್ಸ್   ವಿಷಯಗಳಲ್ಲಿ ಡಿಪ್ಲೊಮಾ ಕೋರ್ಸ್ ಆರಂಭಿಸಲಾಗುವುದು ಎಂದು ಪ್ರಕಟಿಸಿದ್ದಾರೆ. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ವರದರಾಜನ್ ಕೃಷ್ಣ,  ಡಾ.ಜ್ಞಾನವೇಲ್ ಮುತ್ತರಸು, ಪವನ್ ಕುಮಾರ್ ಮತ್ತು ಡಾ.ಬಿ.ಆರ್.ಸುಪ್ರೀತ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ

ಮಾತನಾಡಿ ಅನ್ವೇಷಣಾತ್ಮಕ ಮತ್ತು ಸೃಜನಶೀಲ ಮನೋಭಾವವನ್ನು ಬೆಳೆಸಿಕೊಳ್ಳುವಂತೆ ಕರೆ ನೀಡಿದ್ದಾರೆ.

<><*<><>*><>

ತಾತ್ಕಾಲಿಕವಾಗಿ ಬಂದ್ ಆಗಿದ್ದ ಬೆಂಗಳೂರಿನ ಕಬ್ಬನ್ ಪಾಕ್ ಮೆಟ್ರೋ ಸ್ಟೇಷನ್ ಬೆಳಗ್ಗೆ ೧೧ ಗಂಟೆಯಿಂದ ಪುನರ್ ಆರಂಭಗೊಂಡಿದೆ. ಮೆಟ್ರೋ ನಿಲ್ದಾಣವನ್ನು ಸಾರ್ವಜನಿಕರ ಓಡಾಡಕ್ಕೆ ತೆರೆಯಲಾಗಿದೆ. ಈ ಕುರಿತಂತೆ ನಮ್ಮ ಮೆಟ್ರೋ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿದೆ. ವಿದ್ಯುತ್ ವ್ಯತ್ಯಯದಿಂದಾಗಿ ಕಬ್ಬನ್ ಪಾರ್ಕ್ ಮೆಟ್ರೋ ಸ್ಟೇಷನ್ ಕೆಲ ಗಂಟೆಗಳ ಕಾಲ ಬಂದ್ ಆಗಿತ್ತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>